ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

{ಆಯುಕ್ತರ ಕಛೇರಿ, ಉನ್ನತ ಶಿಕ್ಷಣ ಸೌಧ, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-560001}

ಸಂಖ್ಯೆ:ಕಾಶಿಇ/ನೇವಿ-1/ಸಪ್ರಹೆಪ/125/2020-21 ದಿನಾಂಕ: 10.01.2024.

## ಆದೇಶ

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾಗಿ, ಸರ್ಕಾರದಿಂದ ನೇಮಕಾತಿ ಆದೇಶ ಹೊರಡಿಸಿರುವ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿ ಆದೇಶ ನೀಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/226/ಡಿಸಿಇ/2018, ದಿ:23.06.2020.
2) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/186/ಡಿಸಿಇ/2020, ದಿ:03.02.2021.
3) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/207/ಡಿಸಿಇ/2022(ಇ), ದಿ:03.11.2023.

*****

ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕೃತ/ಹೆಚ್ಚುವರಿ ಆಯ್ಕೆಪಟ್ಟಿಯನ್ನು ಸರ್ಕಾರವು ಉಲ್ಲೇಖ-(1) & (2) ರ ಅಧಿಸೂಚನೆಗಳಲ್ಲಿ ಪ್ರಕಟಿಸಿದೆ. ಕಾಲೇಜು ಶಿಕ್ಷಣ ಇಲಾಖಾ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ)-ನಿಯಮಗಳು 2014ರ ನಿಯಮ-9ರ ಉಪ-ನಿಯಮ (2) ಮತ್ತು (3) ರ ಅನುಸಾರ **ಕನ್ನಡ ಮತ್ತು ನಿರ್ವಹಣಾಶಾಸ್ತ್ರ** ವಿಷಯದ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ, ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಅಭ್ಯರ್ಥಿಗಳಿಗೆ ಸರ್ಕಾರವು ಉಲ್ಲೇಖ-(3) ರ ಅಧಿಸೂಚನೆಯಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಕಾತಿ ಆದೇಶ ಹೊರಡಿಸಿದೆ.

ಉಲ್ಲೇಖ-(3) ರ ಸರ್ಕಾರದ ಅಧಿಸೂಚನೆಯನ್ವಯ ನೇಮಕಾತಿ ಹೊಂದಿರುವ ಕೆಳಕಂಡ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿ ಆದೇಶ ನೀಡುವ ಸಂಬಂಧ ದಿನಾಂಕ:29.12.2023 ರಂದು ಸ್ಥಳ ಆಯ್ಕೆ ಕೌನ್ಸಿಲಿಂಗ್‌ನ್ನು ಆಯೋಜಿಸಲಾಗಿದ್ದು, ಸದರಿ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಈ ಕೆಳಕಂಡಂತೆ ಅವರುಗಳ ಹೆಸರಿನ ಮುಂದೆ ನಮೂದಿಸಿರುವ ಕಾಲೇಜನ್ನು ಆಯ್ಕೆಮಾಡಿಕೊಂಡಿದ್ದು, ಸದರಿ ಅಭ್ಯರ್ಥಿಗಳಿಗೆ ಯು.ಜಿ.ಸಿ. ವೇತನ ಶ್ರೇಣಿ ರೂ.57,700-1,82,400 ರಲ್ಲಿ ಕೆಲವೊಂದು ಷರತ್ತುಗಳನ್ನು ವಿಧಿಸಿ, ಕಾಲಂ(5) ರಲ್ಲಿ ನಮೂದಿಸಿರುವ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಖಾಲಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

....2

**ಸಾಮಾನ್ಯ (ಮಿಕ್ಕುಳಿದ ವೃಂದ)**

| ಕ್ರ. ಸಂ. | ಪರಿಷ್ಕೃತ / ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿನ ಕ್ರ.ಸಂ. | ಹೆಸರು | ವಿಷಯ | ಆಯ್ಕೆ ಮಾಡಿಕೊಂಡ ಕಾಲೇಜು |
|---|---|---|---|---|
| 1 | 2 | 3 | 4 | 5 |
| 1 | 11 | ವಸಂತ .ಜಿ | ನಿರ್ವಹಣಾಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಂಕರನಾರಾಯಣ, ಕುಂದಾಪುರ ತಾ॥, ಉಡುಪಿ ಜಿಲ್ಲೆ. (205) |
| 2 | 04 | ಯೋಗೇಶ ಹೆಚ್.ವಿ | ಕನ್ನಡ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನಾಪೋಕ್ಲು, ಮಡಿಕೇರಿ ಜಿಲ್ಲೆ. (214) |

**ಷರತ್ತುಗಳು;**

1. ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿ ಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2014 ರ ನಿಯಮ 9ರ ಉಪ-ನಿಯಮ (2) ಮತ್ತು (3) ರೊಂದಿಗೆ ಓದಿಕೊಂಡಂತೆ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957 ರ ನಿಯಮ 5 ರ ಅನುಸಾರ ಈ ನೇಮಕಾತಿಯ ಸಂದರ್ಭದಲ್ಲಿ ಸರ್ಕಾರ ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿನ ಜೇಷ್ಠತೆಯು ಅಂತಿಮವಾಗಿರುತ್ತದೆ.
2. ಮೇಲೆ ತಿಳಿಸಿರುವ ಅಭ್ಯರ್ಥಿಗಳು ಇಲಾಖೆಯ ಅಂತರ್ಜಾಲದಲ್ಲಿ ಈ ಆದೇಶ ಪ್ರಕಟಿಸಲಾದ ದಿನಾಂಕದಿಂದ 15 ದಿವಸಗಳೊಳಗಾಗಿ ಸ್ಥಳ ನಿಯುಕ್ತಿಗೊಳಿಸಲಾದ ಕಾಲೇಜಿನ ಪ್ರಾಂಶುಪಾಲರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಅಭ್ಯರ್ಥಿಯ ನೇಮಕಾತಿ ಆದೇಶ ತಂತಾನೇ ರದ್ದಾಗುತ್ತದೆ.
3. ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿ/ಸಿಬ್ಬಂದಿಗಳು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 252(ಬಿ) ರನ್ವಯ ಸೇವೆಯಿಂದ ಬಿಡುಗಡೆ ಹೊಂದಿ, ಸ್ಥಳ ನಿಯುಕ್ತಿಗೊಳಿಸಿರುವ ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು.
4. ನೇಮಕಗೊಂಡ ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕಾರ್ಯವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು, ಅಭ್ಯರ್ಥಿಗಳ ನೇಮಕಾತಿ ಮತ್ತು ಸ್ಥಳನಿಯುಕ್ತಿ ಅವರ ಶೈಕ್ಷಣಿಕ ಅರ್ಹತೆಗೆ ಸಂಬಂಧಿಸಿದಂತೆ ನಿಯಮಾನುಸಾರ ಎಲ್ಲಾ ಮಾನದಂಡಗಳನ್ನು ತೃಪ್ತಿಕರವಾಗಿ ಪಾಲಿಸಿರುವ ಷರತ್ತಿಗೊಳಪಟ್ಟಿದೆ.
5. ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ಅಭ್ಯರ್ಥಿಯು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.
6. ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ಅಕೌಂಟ್ಸ್ ಹೈಯರ್ ಹಾಗೂ ಜನರಲ್ ಲಾ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಹಾಗೂ ಇತರೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.
7. ನೇಮಕಗೊಂಡ ಅಭ್ಯರ್ಥಿಗಳಿಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.
8. ಪರೀಕ್ಷಾರ್ಥ ಅವಧಿಯನ್ನು ಘೋಷಿಸಲು ಅವಶ್ಯಕತೆ ಇರುವ ಓರಿಯಂಟೇಷನ್ ಮತ್ತು ರಿಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.

....3

9. ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಕಾರ್ಯವರದಿ ಮಾಡಿಕೊಂಡ ದಿನಾಂಕದಿಂದ ನಿಯಮಾನುಸಾರ ವೇತನ, ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುತ್ತಾರೆ.
10. ಅಭ್ಯರ್ಥಿಯು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುವುದಿಲ್ಲ.
11. ಮೇಲೆ ನಮೂದಿಸಿರುವ ಅಭ್ಯರ್ಥಿಗಳು ದಿನಾಂಕ:01-04-2006ರ ನಂತರ ಸರ್ಕಾರಿ ಸೇವೆಗೆ ಸೇರಿರುವುದರಿಂದ ಅವರು ನಿಯಮಾನುಸಾರ ಹೊಸ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.
12. ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆ/ನಿಯೋಜನೆಗೆ ಅವಕಾಶವಿರುವುದಿಲ್ಲ.
13. ಸದರಿ ನೇಮಕಾತಿ ಹಾಗೂ ಸ್ಥಳನಿಯುಕ್ತಿ ಆದೇಶವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಇಲ್ಲಿ ದಾಖಲಾಗಿರುವ ರಿಟ್ ಅರ್ಜಿ/ಅರ್ಜಿಗಳ ಅಂತಿಮ ತೀರ್ಪಿನ ಪಾಲನೆಗೆ ಒಳಪಟ್ಟಿರುತ್ತದೆ.
14. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 43 ಸೇವನೆ 2008, ದಿನಾಂಕ:07.03.2012 ರಲ್ಲಿ ಜಾರಿಗೊಳಿಸಿರುವ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಹಾಗೂ ಸದರಿ ನಿಯಮಗಳಿಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ತಿದ್ದುಪಡಿ ಆದೇಶಗಳಲ್ಲಿ ನಿರ್ದಿಷ್ಟಪಡಿಸಿರುವಂತೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ.

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

<u>ಇವರಿಗೆ,</u>

1) ಮೇಲ್ಕಾಣಿಸಿದ ಅಭ್ಯರ್ಥಿಗಳಿಗೆ -ಇಲಾಖೆಯ ಅಂತರ್ಜಾಲದಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವುದು.
2) ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಅಭ್ಯರ್ಥಿಯನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವ ಮೊದಲು ಅವರ ಶೈಕ್ಷಣಿಕ ವಿದ್ಯಾರ್ಹತೆ, ಮೀಸಲಾತಿ ಹಾಗೂ ಇನ್ನಿತರೆ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ಪರಿಶೀಲಿಸತಕ್ಕದ್ದು, ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಯಾವುದಾದರು ನ್ಯೂನ್ಯತೆಗಳು ಕಂಡುಬಂದಲ್ಲಿ ಕೂಡಲೇ ಈ ಕಛೇರಿಗೆ ವರದಿ ಮಾಡುವುದು.

<u>ಪ್ರತಿಯನ್ನು:</u>

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು. ಮಾಹಿತಿಗಾಗಿ
2) ಕರ್ನಾಟಕ ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2), ಬೆಂಗಳೂರು.
3) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮಂಗಳೂರು.
4) ಮಾಹಿತಿ ತಂತ್ರಜ್ಞಾನ ಅಧಿಕಾರಿ, ಕೇಂದ್ರ ಕಛೇರಿ, ಕಾ.ಶಿ.ಇ., ಬೆಂಗಳೂರು-ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಿದೆ.
5) ವ್ಯವಸ್ಥಾಪಕರು/ಅಧೀಕ್ಷಕರು, ವರ್ಗಾವಣೆ ಮತ್ತು ನಿಯೋಜನೆ ವಿಭಾಗ, ಸೇವಾ ವಿಭಾಗ, ಬಡ್ತಿ ಮತ್ತು ಸ್ಥಾನೀಕರಣ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.